Fax: 08282-256262
E-mail:kuvempuacademic@gmail.com

Phone No - 08282-256149
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.
Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings

ಸಂಖ್ಯೆ:ಕುವಿ:ಶೈವಿ:ಎಸಿ–4:180ಡಿ:4310:2021–22

ದಿನಾಂಕ:29–12–2021

## ಸುತ್ತೋಲೆ

**ವಿಷಯ: 2021–22ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಪ್ರವೇಶಾತಿಯಲ್ಲಿ ಖಾಲಿ ಉಳಿಯುವ ರಿಕ್ತ ಸ್ಥಾನಗಳ ಭರ್ತಿ ಕುರಿತು.**

ಉಲ್ಲೇಖ: 1. ವಿ.ವಿ. ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–4(180ಡಿ):3715:/2021–22, ದಿನಾಂಕ:01–12–2021.
2. ವಿ.ವಿ. ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ–4(168):1701/2017–18, ದಿನಾಂಕ:03–07–2017.
3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:28–12–2021

*****

ವಿಶ್ವವಿದ್ಯಾಲಯದ 2021–22ನೇ ಸಾಲಿನ ಪ್ರಥಮ ವರ್ಷದ ಸ್ನಾತಕೋತ್ತರ ಪ್ರವೇಶಾತಿಗೆ ಸಂಬಂಧಿಸಿದಂತೆ ಉಲ್ಲೇಖಿತ (1)ರಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು, ಪ್ರವೇಶಾತಿ ಕೌನ್ಸಿಲಿಂಗ್ ಪ್ರಕ್ರಿಯೆಗಳು ದಿನಾಂಕ:27–12–2021 ರಿಂದ 29–12–2021 ರವರೆಗೆ ಆಯಾ ಸ್ನಾತಕೋತ್ತರ ವಿಭಾಗಗಳಲ್ಲಿ ನಡೆಯಲಿದೆ. ಆಯಾ ಸ್ನಾತಕೋತ್ತರ ವಿಭಾಗಗಳಲ್ಲಿ ವಿಶ್ವವಿದ್ಯಾಲಯದ ಅಭ್ಯರ್ಥಿಗಳ ಲಭ್ಯತೆ ಕಡಿಮೆ ಇದ್ದಲ್ಲಿ ಉಲ್ಲೇಖಿತ(2)ರ ಈ ಕಛೇರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ಈ ಕೆಳಕಂಡ ಕ್ರಮವನ್ನು ಅನುಸರಿಸಲು ಸೂಚಿಸಲಾಗಿದೆ.

1. ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ನಿಗದಿತ ಪ್ರವೇಶಮಿತಿ ಭರ್ತಿಯಾಗದ ಸಂದರ್ಭದಲ್ಲಿ ಕುವೆಂಪು ವಿಶ್ವವಿದ್ಯಾಲಯದ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಪಕ್ಷದಲ್ಲಿ ಅನ್ಯ ವಿಶ್ವವಿದ್ಯಾಲಯಗಳ ಅಭ್ಯರ್ಥಿಗಳನ್ನು ಕುವೆಂಪು ವಿಶ್ವವಿದ್ಯಾಲಯದ ಸಾಮಾನ್ಯ ಅಭ್ಯರ್ಥಿಗಳೆಂದು ಪರಿಗಣಿಸಿ, ನಿಗದಿತ ಶುಲ್ಕಗಳನ್ನು ವಿಧಿಸಿ, ಮೆರಿಟ್ ಆಧಾರದ ಮೇಲೆ ಖಾಲಿ ಉಳಿದಿರುವ ರಿಕ್ತ ಸ್ಥಾನಕ್ಕೆ ಭರ್ತಿ ಮಾಡಿಕೊಳ್ಳುವುದು.
2. ಕೆಲವು ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ನಿಗದಿಪಡಿಸಿದ ಸೀಟುಗಳಿಂತ ಕಡಿಮೆ ಅರ್ಜಿಗಳು ಬಂದಿರುವ ಪಕ್ಷದಲ್ಲಿ ಅಂತಹ ವಿಭಾಗದವರು ಅರ್ಜಿ ಸಲ್ಲಿಸದೇ ಇರುವ ಅಭ್ಯರ್ಥಿಗಳಿಗೆ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ತಿಳಿಸಿ, ಪ್ರವೇಶಾತಿ ಕೌನ್ಸಿಲಿಂಗ್‌ಗೆ ನಿಗದಿಪಡಿಸಿದ ನಿಗದಿತ ದಿನಾಂಕದೊಳಗೆ ಖಾಲಿ ಉಳಿದಿರುವ ರಿಕ್ತ ಸ್ಥಾನಗಳನ್ನು ನಿಯಾಮಾನುಸಾರ ಭರ್ತಿ ಮಾಡಿಕೊಳುವುದು. ಈ ಸಂಬಂಧ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಗದಿತ ಅರ್ಜಿ ಶುಲ್ಕವನ್ನು ಬ್ಯಾಂಕ್‌ನಲ್ಲಿ ಪಾವತಿಸಿ, ಸಂಬಂಧಪಟ್ಟ ವಿಭಾಗಕ್ಕೆ ದಾಖಲಾತಿಗಳನ್ನು ಸಲ್ಲಿಸುವುದು.

ಮಾನ್ಯ ಕುಲಪತಿಯವರ ಅನುಮೋದನೆಯಾಗಿದೆ

29/12/21
ಉಪಕುಲಸಚಿವರು
ಉಪ ಕುಲಸಚಿವ
ಶೈಕ್ಷಣಿಕ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451.

ಗೆ,

ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು/ ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು/ ಚಿಕ್ಕಮಗಳೂರು.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಕಛೇರಿ ಪ್ರತಿ.